Pani

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 1) ಶ್ರೀ ಸುರೇಶ ನಾಯಕ ಬಿನ್ ಸೇಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು 2) ಶ್ರೀ ಸೋಮಶೇಖರ ರವದಿ ಬಿನ್ ಬಸವರಾಜ, ವಾಟರ್‌ಮನ್, ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14(ಎ) ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** 1. ನಿಬಂಧಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಕಂಪ್ಲೇಂಟ್ / ಉಪಲೋಕ್ / ಬಿಜಿಎಂ / 1239 / 2021 / PO ARE-06 (Presenting Officer section), ದಿನಾಂಕ: 22.02.2022.

2. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ: 29.09.2020

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರದ ಜೊತೆಯಲ್ಲಿ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 17.02.2022 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಮಹ್ಮದಲಿ ಬಿನ್ ಗಫಾರಸಾಬಹಮ್ಮಸಾಗರ, ಲಕ್ಕುಂಡಿ ಗ್ರಾಮ, ಗದಗ ತಾಲ್ಲೂಕು & ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪುತ್ತಾರೆ) ರವರು ಶ್ರೀ ಸುರೇಶ ನಾಯಕ ಬಿನ್ ಸೇಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಸೋಮಶೇಖರ ರವದಿ ಬಿನ್ ಬಸವರಾಜ, ವಾಟರ್‌ಮನ್, ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ 1 ಮತ್ತು 2ನೇ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ ಆರೋಪಕ್ಕೆ ಸಂಬಂಧಿಸಿದಂತೆ ದೂರು ನೀಡಿದ್ದು, ಈ ದೂರಿಗೆ ಸಂಬಂಧಿಸಿದಂತೆ ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಗದಗ ಜಿಲ್ಲೆ ರವರು ತನಿಖೆ ನಡೆಸಿ ಸಲ್ಲಿಸಿರುವ ತನಿಖಾ ವರದಿರನ್ವಯ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ಗದಗ ತಾಲ್ಲೂಕಿನ ಲಕ್ಕುಂಡಿ ಗ್ರಾಮದ ವಾಸಿಯಾಗಿದ್ದು, ಇವರ ಹೆಸರಿನಲ್ಲಿ ಎರಡು ಮತ್ತು ಅವರ ಪತ್ನಿಯ ಹೆಸರಿನಲ್ಲಿ ಎರಡು ಮನೆಗಳಿದ್ದು, ಆ ನಾಲ್ಕು ಮನೆಗಳ ಕಂಪ್ಯೂಟರ್ ಉತಾರ ಪಡೆಯಲು ಸಂಬಂಧಪಟ್ಟ ಆಸ್ತಿಗಳ ಪೋಟೋ ಮತ್ತು ದಾಖಲೆಗಳನ್ನು ಸಲ್ಲಿಸಿದ್ದು, ನಾಲ್ಕು ಆಸ್ತಿಗಳ ಕಂಪ್ಯೂಟರ್ ಉತಾರ ಪಡೆಯಲು ಒಟ್ಟು 6000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುವ ಶ್ರೀ ಸುರೇಶ ನಾಯಕ ಬಿನ್ ಸೇಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರುದಾರರು ಕೋರಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಪ್ರಕರಣವನ್ನು ದಾಖಲಿಸಿಕೊಂಡು ದಿನಾಂಕ: 08.01.2018 ರಂದು ದೂರುದಾರರಿಗೆ 1ನೇ ಎದುರುದಾರರು ಲಂಚದ ಹಣವನ್ನು 2ನೇ ಎದುರುದಾರರಿಗೆ ನೀಡುವಂತೆ ತಿಳಿಸಿದ್ದು, 2ನೇ ಎದುರುದಾರರು ಒಟ್ಟು, 6,000/-ಗಳನ್ನು ದೂರುದಾರರಿಂದ ಪಡೆದಿರುವುದು ಪೊಲೀಸ್ ನಿರೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಗದಗ ಜಿಲ್ಲೆ ರವರು ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳಲ್ಲಿ ಎದುರುದಾರರ ಮೇಲಿನ ಆರೋಪವು ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡುಬಂದಿರುತ್ತದೆ.

ಸದರಿ ಆರೋಪಕ್ಕೆ ಸಂಬಂಧಿಸಿದಂತೆ ಎದುರುದಾರರು 1ನೇ ಎದುರುದಾರರು ನಾನು ಯಾವುದೇ ಲಂಚಕ್ಕೆ ಬೇಡಿಕೆ ಇಟಿರುವುದಿಲ್ಲವೆಂದು ಮತ್ತು 2ನೇ ಎದುರುದಾರರು ದೂರುದಾರರ ಕಡೆಯಿಂದ ಹಣವನ್ನು ತೆಗೆದುಕೊಳ್ಳುವಂತೆ 1ನೇ ಎದುರುದಾರರು ಹೇಳಿದ್ದರಿಂದ ಒಟ್ಟು 6000/- ಗಳನ್ನು ಸ್ವೀಕರಿಸಿದಾಗಿ ಸಮಜಾಯಿಷಿಯನ್ನು ಸಲ್ಲಿಸಿರುತ್ತಾರೆ. ಎದುರುದಾರರು ನೀಡಿದ ಸಮಜಾಯಿಷಿಯು ಸಮಂಜಸವಾಗಿರುವುದಿಲ್ಲ. ಆದ್ದರಿಂದ ದೂರು ಅರ್ಜಿ, ಸಾಕ್ಷಿದಾರರ ಹೇಳಿಕೆಗಳು, ತನಿಖಾಧಿಕರಿ ಸಂಗ್ರಹಿಸಿದ ದಾಖಲೆಗಳು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕಾರ ಕಾರಣ ತೋರಿಸಿಲ್ಲವೆಂದು ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ / ಸಾರ್ವಜನಿಕ ನೌಕರರಾಗಿದ್ದು, ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ತವ್ಯದಲ್ಲಿ ನಿಷ್ಠೆ ತೋರಿಸದೆ ಭ್ರಷ್ಟಾಚಾರವೆಸಗಿ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1)(i) ರಿಂದ (iv) ರನ್ವಯ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಎದುರುದಾರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವೆ ನಿಯಮ 1957 ರ ನಿಯಮ14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆಯನ್ನು ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಬೇಕೆಂದು ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಸದರಿ ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಸದರಿ ಪ್ರಕರಣದಲ್ಲಿನ 1ನೇ ಎದುರುದಾರರಾದ ಶ್ರೀ ಸುರೇಶ ನಾಯಕ ಬಿನ್ ಸೇಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧದ ಲಂಚ ಸ್ವೀಕರಿಸಿದ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ.

ಮುಂದುವರೆದು, ಈ ಪ್ರಕರಣದಲ್ಲಿನ 2ನೇ ಎದುರುದಾರರಾದ ಶ್ರೀ ಸೋಮಶೇಖರ ರವದಿ ಬಿನ್ ಬಸವರಾಜ, ವಾಟರ್‌ಮನ್, ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರು ಸರ್ಕಾರಿ ನೌಕರರಾಗಿರುವುದಿಲ್ಲ. ಸದರಿಯವರು ಸ್ಥಳೀಯ ಸಂಸ್ಥೆಯ ನೌಕರರಾಗಿದ್ದು, ಉಲ್ಲೇಖಿತ (2) ರ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29.09.2020 ರಲ್ಲಿ ಲೋಕಾಯುಕ್ತವು ಅಂತಹ ನೌಕರನ ವಿರುದ್ಧ ಮಾಡಲಾಗಿರುವ ದೂರುಗಳ ಬಗ್ಗೆ ವಿಚಾರಣೆಯನ್ನು ನಡೆಸಲು ಅನುಮತಿಯನ್ನು ಕೋರಿದಾಗ ಅಂತಹ ಆರೋಪಗಳ ಮೇಲೆ ವಿಚಾರಣೆಯನ್ನು ಕೈಗೊಳ್ಳಲು ಲೋಕಾಯುಕ್ತಕ್ಕೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್‌ರವರು ಅನುಮತಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/40/ಗ್ರಾಪಂಕಾ/2022, ಬೆಂಗಳೂರು,**
**ದಿನಾಂಕ: 31.03.2022**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಈ ಪ್ರಕರಣದಲ್ಲಿ 1ನೇ ಎದುರುದಾರರಾದ ಶ್ರೀ ಸುರೇಶ ನಾಯಕ ಬಿನ್ ಸೇಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧದ ಲಂಚ ಸ್ವೀಕರಿಸಿದ ಆರೋಪದ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ)ರಡಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಮುಂದುವರೆದು, ಈ ಪ್ರಕರಣದಲ್ಲಿ 2ನೇ ಎದುರುದಾರರಾದ ಶ್ರೀ ಸೋಮಶೇಖರ ರವದಿ ಬಿನ್ ಬಸವರಾಜ, ವಾಟರ್‌ಮನ್, ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ ಇವರು ಸ್ಥಳೀಯ ಸಂಸ್ಥೆಯ ನೌಕರರಾಗಿರುವುದರಿಂದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29.09.2020 ರಂದು ಹೊರಡಿಸಿರುವ ಗ್ರಾಮ ಪಂಚಾಯಿತಿಯ ಸಿಬ್ಬಂದಿಯ ಸ್ವರೂಪ, ವೇತನ

ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಸೇವಾ ಷರತ್ತುಗಳು ನಿಯಮಗಳು 2020ರ ಅಧಿಸೂಚನೆಯಲ್ಲಿ ತಿಳಿಸಿರುವಂತೆ ನಿಯಮಾನುಸಾರ ಪರಿಶೀಲಿಸಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಗದಗ ರವರಿಗೆ ಸೂಚಿಸಿದೆ.

ಈ ಪ್ರಕರಣದಲ್ಲಿ 1ನೇ ಎದುರುದಾರರಿಗೆ ಸಂಬಂಧಿಸಿದಂತೆ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು ಆಪಾದಿತರಿಗೆ ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ರಾಜು ಎಂ.ಎಂ) 31/3/22
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಬೆಂಗಳೂರು, ಕರ್ನಾಟಕ.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. **(ಪುಟ: 01 ರಿಂದ 138 ರವರೆಗೆ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).**
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಗದಗ ಜಿಲ್ಲೆ.
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಬಾದಾಮಿ, ಗದಗ ಜಿಲ್ಲೆ. ಶ್ರೀ ಸುರೇಶ ನಾಯಕ ಬಿನ್ ಸೇಲಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಲಕ್ಕುಂಡಿ ಗ್ರಾಮ ಪಂಚಾಯಿತಿ, ಗದಗ ತಾಲ್ಲೂಕು ಮತ್ತು ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಗದಗ, ಗದಗ ಜಿಲ್ಲೆ ಇವರ ಮುಖಾಂತರ)**
5. ಗಣಕ ಕೋಶ.ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.